**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 709 ಗ್ರಾಪಂಅ 2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 08.08.2016

**ಇಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

**ಇವರಿಗೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.

**ಮಾನ್ಯರೆ,**

**ವಿಷಯ:** ಗ್ರಾಮ ಪಂಚಾಯತಿಗಳಲ್ಲಿ ಆಶಾ ಕಾರ್ಯಕರ್ತೆಯರನ್ನು ನೇಮಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರ ಅ.ಸ.ಪ.ಸಂಖ್ಯೆ: ಆಕುಕ 315 ಪ್ರಕಾ 2016, ದಿನಾಂಕ 06.08.2016

*****

ಆರೋಗ್ಯ ಇಲಾಖೆಯ ಯೋಜನೆಗಳು ಯಶಸ್ವಿಯಾಗಬೇಕಾದರೆ 1000 ಜನಸಂಖ್ಯೆಗೆ ಒಬ್ಬರಂತೆ ಆಶಾ ಕಾರ್ಯಕರ್ತೆಯರನ್ನು ನೇಮಿಸಬೇಕಾಗಿದ್ದು, ಬಹುತೇಕ ಜಿಲ್ಲೆಗಳಲ್ಲಿ ಶೇ.30 ರಷ್ಟು ಆಶಾ ಕಾರ್ಯಕರ್ತೆಯರು ಇನ್ನೂ ನೇಮಕಗೊಂಡಿರುವುದಿಲ್ಲವಾದ್ದರಿಂದ, ಸದರಿಯವರ ನೇಮಕಾತಿಯನ್ನು ಕೂಡಲೇ ಗ್ರಾಮ ಸಭೆಗಳಲ್ಲಿ ಮಾಡಲು ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚನೆ ನೀಡಲು ಉಲ್ಲೇಖಿತ ಪತ್ರದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರು ಕೋರಿರುತ್ತಾರೆ.

ಆದುದರಿಂದ, ಆರೋಗ್ಯ ಇಲಾಖೆಯೊಂದಿಗೆ ಸಮಾಲೋಚಿಸಿ, ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ 1000 ಜನಸಂಖ್ಯೆಗೆ ಒಬ್ಬರಂತೆ ಆಶಾ ಕಾರ್ಯಕರ್ತೆಯರನ್ನು ನೇಮಿಸಲು ಶೀಘ್ರ ಅಗತ್ಯ ಕ್ರಮವಹಿಸುವಂತೆ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ತಮ್ಮನ್ನು ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

ನಿಮ್ಮ ನಂಬುಗೆಯ

(ಟಿ.ವಿ.ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ:**

1. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು. (ಆಯಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ಕೊಠಡಿ ಸಂಖ್ಯೆ 105, ಮೊದಲನೇ ಮಹಡಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.